**All India Radio: Bangalore**
**Regional Bulletin In Kannada**
**05.04.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಡಾ.ಬಾಬು ಜಗಜೀವನ್ ರಾಂ ಅವರ ೧೧೯ನೇ ಜನ್ಮ ದಿನಾಚರಣೆ : ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಪ್ರಶಸ್ತಿ ಪ್ರದಾನ
2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಾಜಿ ಉಪಪ್ರಧಾನಿ ಬಾಬು ಜಗಜೀವನ್ ರಾಂ ಜನ್ಮದಿನ ಆಚರಣೆ
3. ಭದ್ರ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರದಿಂದ ೨೧ ಸಾವಿರ ಕೋಟಿ ರೂಪಾಯಿ ಅನುದಾನ ಬಿಡುಗಡೆಗೆ ಅನುಮೋದನೆ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ಮಾಹಿತಿ ಹಕ್ಕು ೨೦೦೫ರ ಕಾಯ್ದೆಯಡಿ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳಿಗೆ ನಿಗದಿತ ಅವಧಿಯೊಳಗೆ ಮಾಹಿತಿ ಒದಗಿಸುವುದು ಅಗತ್ಯ - ಆಯುಕ್ತ ಡಾ. ಹರೀಶ್ ಕುಮಾರ್

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ ಅವರ ೧೧೯ನೇ ಜನ್ಮದಿನದ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಬಾಬೂಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮಿಸಿದರು. ಇದೇ ವೇಳೆ ಅವರು, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಡಾ.ಬಾಬು ಜಗಜೀವನ ರಾಮ್ ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಸಚಿವರಾದ ಹೆಚ್.ಸಿ.ಮಹದೇವಪ್ಪ ಮತ್ತು ಕೆ.ಹೆಚ್.ಮುನಿಯಪ್ಪ ಸೇರಿ ಹಲವರು ಉಪಸ್ಥಿತರಿದ್ದರು.

<><><><>

ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ರವರ ೧೧೯ನೇ ಜನ್ಮ ದಿನಾಚರಣೆಯನ್ನು ರಾಜ್ಯದ ಹಲವು ಜಿಲ್ಲೆಗಳಲ್ಲಿ ಆಚರಿಸಲಾಗುತ್ತಿದೆ. ಗಣಿನಾಡು ಬಳ್ಳಾರಿಯಲ್ಲಿ ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಬಾಬು ಜಗಜೀವನ್ ರಾಮ್ ಅವರ ಜನ್ಮ ದಿನಾಚರಣೆಯನ್ನು ಜಿಲ್ಲಾಡಳಿತದಿಂದ ಆಚರಿಸಲಾಯಿತು. ಬಳ್ಳಾರಿ ನಗರದ ಬಾಬು ಜಗಜೀವನ್ ರಾಮ್ ಭವನದಲ್ಲಿರುವ ಜಗಜೀವನ್ ರಾಮ್ ಅವರ ಪುತ್ಥಳಿಗೆ ಮೇಯರ್ ಪಿ.ಗಾದೆಪ್ಪ ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಮೇಯರ್ ಗಾದೆಪ್ಪ, ನಮ್ಮ ದೇಶ ಆಹಾರಕ್ಕಾಗಿ ಪರ ದೇಶಗಳನ್ನು ಅವಲಂಬಿಸದಂತೆ ಮಾಡಿದ ಖ್ಯಾತರು ಜಗಜೀವನ್ ರಾಂ ಅವರು ಅವರ ಸ್ಮರಣೆ ನಾವು ಸದಾ ಮಾಡಬೇಕಿದೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ರವರ ೧೧೯ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಬಾಬು ಜಗಜೀವನರಾಂರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಶಾಸಕ ಧೀರಜ್ ಮುನಿರಾಜು, ಹಸಿರು ಕ್ರಾಂತಿಯ ಮೂಲಕ ಆಹಾರದ ಕೊರತೆ ನೀಗಿ, ದೀನ ದಲಿತರ, ಶೋಷಿತರ ಬಾಳಿಗೆ ಉತ್ತಮ ಮಾರ್ಗ ತೋರಿಸಿದ್ದ ಡಾ.ಬಾಬು ಜಗಜೀವನರಾಂ, ಸಜ್ಜನ ರಾಜಕಾರಣಿಗಳಾಗಿ ಎಲ್ಲರಿಗೂ ಮಾದರಿಯಾಗಿದ್ದರು ಎಂದು ಸ್ಮರಿಸಿದರು. ಹಸಿರುಕ್ರಾಂತಿ ಹರಿಕಾರ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ೧೧೯ನೇ ಜಯಂತ್ಯೋತ್ಸವ ಗದಗ ಜಿಲ್ಲಾಡಳಿತ ಭವನದಲ್ಲಿ ಜರುಗಿತು. ಈ ವೇಳೆ ಡಾ. ಬಾಬು ಜಗಜೀವನ ರಾಂ ಅವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅವರು ಪುಷ್ಪನಮನ ಸಲ್ಲಿಸಿದರು. ನಂತರ ಅವರು ಮಾತನಾಡಿ, ಡಾ.ಬಾಬು ಜಗಜೀವನ ರಾಂ ಅವರು ದೇಶದ ಸಾಮಾಜಿಕ ಸುಧಾರಣೆಗೆ, ಮಹಿಳಾ ಶಿಕ್ಷಣಕ್ಕೆ, ಅಲ್ಪಸಂಖ್ಯಾತ ಹಕ್ಕುಗಳಿಗೆ, ಮತ್ತು ಪರಿಸರ ಸಂರಕ್ಷಣೆಗೆ ಅಪಾರವಾದ

ಕೊಡುಗೆಗಳನ್ನು ಅವರು ನೀಡಿದ್ದರು ಎಂದರು. ಹಸಿರು ಕ್ರಾಂತಿ ಸೇರಿದಂತೆ ಆಹಾರ ಭದ್ರತೆ, ಸಮಾನತೆ ಮತ್ತು ನ್ಯಾಯಕ್ಕಾಗಿ ನಿರಂತರ ಹೋರಾಟ ನಡೆಸಿದ್ದರು ಎಂದು ತಿಳಿಸಿದರು. ದಾವಣಗೆರೆಯಲ್ಲಿಂದು ಭಾರತದ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಂ ಅವರ ೧೧೯ನೇ ಜನ್ಮ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ, ಜಿಲ್ಲಾಡಳಿತದಿಂದ ಸಾಂಕೇತಿಕವಾಗಿ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ಬೆಳಿಗ್ಗೆ ಇಲ್ಲಿನ ಮಹಾನಗರ ಪಾಲಿಕೆ ಆವರಣದಲ್ಲಿರುವ ಜಗಜೀವನ್ ರಾಂ ಅವರ ಪುತ್ಥಳಿಗೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೇಖರ್ ಹೆಚ್.ಟಿ. ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಗಿತ್ತೆ ಮಾಧವ ವಿಠ್ಠಲರಾವ್ ಅವರು ಗೌರವ ಸಲ್ಲಿಸಿದರು. ಧಾರವಾಡ ನಗರದ ಸನ್ಮತಿ ಮಾರ್ಗದ ಹತ್ತಿರ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ವತಿಯಿಂದ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಸಹಯೋಗದಲ್ಲಿ, ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪ ಪ್ರಧಾನಿ ಡಾ॥ ಬಾಬು ಜಗಜೀವನ ರಾಂ ಅವರ ಜಯಂತಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಸ್ನೇಹಲ್ ಆರ್. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ್, ಜಗಜೀವನ ರಾಂ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

<><><><>

'ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಈಗಾಗಲೇ ೨೧ ಸಾವಿರ ಕೋಟಿ ರೂಪಾಯಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಬಾಕಿ ಹಣ ಬಿಡುಗಡೆಯ ಪ್ರಕ್ರಿಯೆ ಚಾಲ್ತಿಯಲ್ಲಿದೆ" ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದರು. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭದ್ರಾ ಮೇಲ್ದಂಡೆ ಯೋಜನೆಯ ಒಟ್ಟು ಅಂದಾಜು ವೆಚ್ಚವು ಈಗ ೨೮ ಸಾವಿರ ಕೋಟಿ ರೂಪಾಯಿಗಳಿಗೆ ತಲುಪಿದೆ. ಈ ಬೃಹತ್ ಮೊತ್ತದಲ್ಲಿ ಈಗಾಗಲೇ ಸುಮಾರು ೧೮ ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಾಗಿದೆ ಎಂದರು. ಕೇಂದ್ರ ಸರ್ಕಾರವು ೨೧ ಸಾವಿರ ಕೋಟಿ ರೂಪಾಯಿಗಳ ಕ್ರಿಯಾ ಯೋಜನೆಗೆ ಅಂತಿಮವಾಗಿ ಒಪ್ಪಿಗೆ ಸೂಚಿಸಿದೆ. ಪ್ರಸ್ತುತ ಈ ವಿಷಯವು ಹಣಕಾಸು ಇಲಾಖೆಯ ಪರಿಶೀಲನೆಯಲ್ಲಿದ್ದು, ಅಲ್ಲಿಂದ ಅನುಮೋದನೆ ಪಡೆದ ನಂತರ ಕೇಂದ್ರ ಸಚಿವ ಸಂಪುಟದ ಮುಂದೆ ಬರಲಿದೆ. ಸಂಪುಟದ ಒಪ್ಪಿಗೆ ಸಿಕ್ಕ ಕೂಡಲೇ ಹಣ ಬಿಡುಗಡೆಯಾಗಲಿದೆ ಎಂದರು.

<><><><>

ಮಾಹಿತಿ ಹಕ್ಕು ಕಾಯಿದೆ ೨೦೦೫ ರಡಿ ಮಾಹಿತಿ ಕೋರಿ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳಿಗೆ ನಿಗಧಿತ ಅವಧಿಯೊಳಗೆ ಅಗತ್ಯ ಮಾಹಿತಿ ಒದಗಿಸುವುದು ಎಲ್ಲಾ ಇಲಾಖೆಗಳ ಮಾಹಿತಿ ಅಧಿಕಾರಿಗಳ ಕಡ್ಡಾಯ ಜವಾಬ್ದಾರಿಯಾಗಿದೆ ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತ ಡಾ. ಹರೀಶ್ ಕುಮಾರ್ ತಿಳಿಸಿದರು. ಅವರಿಂದು ಕಾರವಾರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಆಯೋಜಿಸಿದ್ದ ಮಾಹಿತಿ ಹಕ್ಕು ಕಾಯ್ದೆ ಕುರಿತು ಜಾಗೃತಿ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು. ಮಾಹಿತಿ ಹಕ್ಕು ಕಾಯಿದೆಯು ಸಾರ್ವಜನಿಕ ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಕಾನೂನಾತ್ಮಕವಾಗಿ ಸಾರ್ವಜನಿಕ ಕೆಲಸಗಳನ್ನು ಮಾಡಲು ಸಹಕಾರಿಯಾಗಿದ್ದು, ಇದು ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಣೆ ಮಾಡುವ ಕಾಯಿದೆಯಾಗಿ ಬದಲಾಗಿದೆ ಹಾಗೂ ಈ ಕಾಯಿದೆಯ ಅಧಿಕಾರಿಗಳು ಪ್ರಾಮಾಣಿಕವಾಗಿ ಮತ್ತು ತಪ್ಪುಗಳನ್ನು ಮಾಡದಂತೆ ಕೆಲಸ ನಿರ್ವಹಿಸಲು ಸಹಕಾರಿಯಾಗಿದೆ ಎಂದರು. ನಂತರ ಸಾರ್ವಜನಿಕರು ಹಾಗೂ ಮಾಧ್ಯಮದವರೊಂದಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಸಂವಾದ ಚರ್ಚೆ ನಡೆಯಿತು.

<><><><>

ರಾಜ್ಯದ ಹಲವೆಡೆ ಅಡುಗೆ ಅನಿಲದ ಕೊರತೆಯಿದೆ ಎಂಬ ವದಂತಿಗಳು ಸಾರ್ವಜನಿಕರಲ್ಲಿ ಹರಡಿದ್ದು, ಈ ಕುರಿತು ಮೈಸೂರು ಜಿಲ್ಲೆಯ ಹುಣಸೂರು ಪಟ್ಟಣದ ಅನಿಲ ವಿತರಕ ಚೇತನ್ ಅವರು ಸಾರ್ವಜನಿಕರಿಗೆ ಸ್ಪಷ್ಟನೆ ನೀಡಿದ್ದಾರೆ. ಈ ಬಗ್ಗೆ ಆಕಾಶವಾಣಿಯೊಂದಿಗೆ ಇಂಡೇನ್ ಗ್ಯಾಸ್ ವಿತರಕ ಚೇತನ್ ಮಾತನಾಡಿ, ಗ್ಯಾಸ್ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗಿಲ್ಲ ಮತ್ತು ಪ್ರತಿದಿನವೂ ಸುಗಮವಾಗಿ ವಿತರಣೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ. ಸಿಲಿಂಡರ್ ಪೂರೈಕೆ ಎಂದಿನಂತೆ ಜಾರಿಯಲ್ಲಿದೆ. ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ. ಗೃಹಬಳಕೆಯ ಗ್ರಾಹಕರಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಸದ್ಯಕ್ಕೆ ಮನೆಗಳಿಗೆ ಮೊದಲ ಆದ್ಯತೆ ನೀಡಲಾಗುತ್ತಿದೆ. ಸಿಲಿಂಡರ್ ಬುಕ್ ಮಾಡಿದ ನಂತರ ಕೇವಲ ೧೦ ದಿನಗಳ ಅವಧಿಯಲ್ಲಿ ಗ್ರಾಹಕರಿಗೆ ತಲುಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

<><><><>

ಉತ್ತರಕನ್ನಡ ಜಿಲ್ಲೆಯಲ್ಲಿ ಪೆಟ್ರೋಲ್, ಡಿಸೈಲ್ ಪೂರೈಕೆ ಸಹಜವಾಗಿದ್ದು, ಜನತೆಯಲ್ಲಿ ಅನಗತ್ಯ ಭಯ ಬೇಡ ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ. ಈ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪೆಟ್ರೋಲ್ ಡಿಸೈಲ್‌ಗೆ ಯಾವುದೇ ಕೊರತೆ ಇಲ್ಲ. ಜನತೆ ತಮ್ಮ ಅಗತ್ಯಗಳಿಗೆ ಬೇಕಾದಷ್ಟು ಇಂಧನವನ್ನು ಪಂಪ್‌ಗಳಿಂದ ತುಂಬಿಸಿಕೊಳ್ಳಬಹುದು. ಆದರೆ ಕ್ಯಾನ್‌ಗಳಲ್ಲಿ ತುಂಬಿಸಿಕೊಳ್ಳಲು ಅವಕಾಶ ಇಲ್ಲ. ಇನ್ನು ಮೀನುಗಾರರಿಗೆ ಅಗತ್ಯವಿದ್ದಷ್ಟು ಇಂಧನ ಪೂರೈಕೆಯಾಗುತ್ತಿದೆ ಎಂದರು.

<><><><>

ಶೋಷಣೆಗೆ ಒಳಗಾಗುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸಮಸ್ಯೆಗಳನ್ನು ತಾಲೂಕು ಹಂತದಲ್ಲೇ ಬಗೆಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಎಲ್. ಮೂರ್ತಿ ತಿಳಿಸಿದ್ದಾರೆ. ಮದ್ದೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೋಷಣೆಗೆ ಒಳಗಾಗುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರು ಆಯೋಗಕ್ಕೆ ಬಂದು ನಿರ್ಭೀತಿಯಿಂದ ಪ್ರಕರಣ ದಾಖಲಿಸಬಹುದು. ಅನುಸೂಚಿತ ಜಾತಿಗಳು ಮತ್ತು ಬುಡಕಟ್ಟುಗಳ ಅಯೋಗ ಸದಾ ನಿಮ್ಮೊಂದಿಗೆ ಇರುತ್ತದೆ, ತಾವು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ತಾಲೂಕಿನಿಂದ ಈಗಾಗಲೇ ೪ಲ ಅರ್ಜಿಗಳು ಆಯೋಗಕ್ಕೆ ಸಲ್ಲಿಕೆಯಾಗಿತ್ತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>